Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

10.03.2025 14.30 hrs

<><*<><>*><>

ಮುಖ್ಯಾಂಶಗಳು

- ವಿಧಾನಸಭೆಯಲ್ಲಿ ಕರ್ನಾಟಕ ಸಣ್ಣ ಸಾಲ, ಬಲವಂತದ ಕ್ರಮಗಳ ಪ್ರತಿಬಂಧಕ ವಿಧೇಯಕ ಅಂಗೀಕಾರ
- ೧.ಬೇಸಿಗೆಯಲ್ಲಿ ಬೇಡಿಕೆಗೆ ತಕ್ಕಂತೆ ವಿದ್ಯುತ್ ಪೂರೈಸಲು ಸರ್ಕಾರ ಸಿದ್ಧ- ಇಂಧನ ಸಚಿವ ಕೆ.ಜೆ.ಜಾರ್ಜ್
- ೩.ಅಕ್ರಮ ಚಿನ್ನ ಕಳ್ಳಸಾಗಣೆ ಪ್ರಕರಣ; ನಟಿ ರನ್ಯಾರಾವ್ ಬಗ್ಗೆ ಯಾವುದೇ ಮಾಹಿತಿ ಇಲ್ಲ- ಗೃಹ ಸಚಿವ ಸ್ಪಷ್ಟನೆ
- ೪.ಬಹುಭಾಷಾ ನಟಿ ಶಬಾನಾ ಆಜ್ಮಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಸಣ್ಣ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದವರಿಗೆ ಉಂಟಾಗುವ ಕಿರುಕುಳ ತಪ್ಪಿಸುವ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ - ಬಲವಂತದ ಕ್ರಮಗಳ ಪ್ರತಿಬಂಧಕ ವಿಧೇಯಕ ೨೦೨೫ ವಿಧಾನಸಭೆಯಲ್ಲಿಂದು ಅಂಗೀಕಾರಗೊಂಡಿದೆ. ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಕಾನೂನು ಸಚಿವ ಎಚ್.ಕೆ.ಪಾಟೀಲ್, ಮಂಡಿಸಿದ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ ವಿಧೇಯಕ ೨೦೨೫ಕ್ಕೆ ಸುದೀರ್ಘ ಚರ್ಚೆಯ ಬಳಿಕ ವಿಪಕ್ಷಗಳ ಸಲಹೆ ಹಾಗೂ ಸಹಮತದಿಂದ ಅನುಮೋದನೆ ದೊರೆತಿದೆ. ವಿಷಯ ಪ್ರಸ್ತಾಪಿಸಿದ ಎಚ್.ಕೆ.ಪಾಟೀಲ್, ಕಿರು ಸಾಲ, ಸಣ್ಣ ಸಾಲ, ಖಾಸಗಿ ಹಣಕಾಸು ಮತ್ತು ಇತರೆ ಅನಿಯಂತ್ರಿತ ಲೇವಾದೇವಿ ಮಾಫಿಯಾಗಳಿಂದ ಸಾಲ ಪಡೆದವರಿಗೆ ಉಂಟಾಗುವ ಕಿರುಕುಳ ತಪ್ಪಿಸಿ ರಕ್ಷಣೆ ನೀಡುವ ಉದ್ದೇಶದಿಂದ ಈ ವಿಧೇಯಕ ತರಲಾಗಿದೆ ಎಂದರು. ಇದರಲ್ಲಿ ಸಾಲಗಳನ್ನು ಪಡೆಯುವ ಮತ್ತು ಸಾಲ ಪಡೆದಿರುವ ಅಸಹಾಯಕರನ್ನು ಕಾಪಾಡುವ ಮತ್ತು ರಕ್ಷಿಸುವ ಉದ್ದೇಶವಿದೆ ಎಂದು ಹೇಳಿದರು. ವಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಈಗಾಗಲೇ ಇರುವ ಕಾನೂನುಗಳ ಮೂಲಕ ಹಣಕಾಸು ಅವ್ಯವಹಾರ ಮಾಡುವವರನ್ನು ನಿಯಂತ್ರಿಸಬಹುದಿತ್ತು. ಆದರೆ, ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳುವಲ್ಲಿ ಸಂಪೂರ್ಣ ವಿಫಲವಾಯಿತು ಎಂದು ಸದನದ ಗಮನ ಸೆಳೆದರು. ಬಳಿಕ ವಿಧೇಯಕಕ್ಕೆ ಆಡಳಿತ-ವಿಪಕ್ಷ ನಡುವೆ ಸಹಮತ ಬಂದ ಹಿನ್ನೆಲೆಯಲ್ಲಿ ಸಭಾಧ್ಯಕ್ಷ

ಯು.ಟಿ.ಖಾದರ್ ವಿಧೇಯಕವನ್ನು ಮತಕ್ಕೆ ಹಾಕಿದರು. ಧ್ವನಿಮತದೊಂದಿಗೆ ವಿಧೇಯಕ ಅಂಗೀಕಾರಗೊಂಡಿದೆ.

<><*<><>*><>

ನಮೂನೆ ೫೦ ಹಾಗೂ ೫೩ರಲ್ಲಿ ಸಾಗುವಳಿ ಚೀಟಿ ಕೋರಿ ಬಗರ್‌ಹುಕುಂ ಸಮಿತಿಗೆ ಅರ್ಜಿ ಸಲ್ಲಿಸಿ ವಿಲೇವಾರಿ ಆಗದೇ ಇದ್ದರೆ ಮೇಲ್ಮ್ರವಿಗೆ ಅವಕಾಶವಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಶಾಸಕ ಕೆ.ಎಸ್.ಆನಂದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಒಂದು ವೇಳೆ ಬಗರ್‌ಹುಕುಂ ಸಮಿತಿ, ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿಗಳ ಹಂತದಲ್ಲಿ ಅರ್ಜಿ ತಿರಸ್ಕೃತಗೊಂಡಿದ್ದರೆ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ. ಆದರೆ ಪುನರ್ ಪರಿಶೀಲನೆಗಾಗಿ ಮೇಲ್ಮನವಿ ಸಲ್ಲಿಸಲು ಕಲಂ ೧೦೮ರಲ್ಲಿ ಅವಕಾಶವಿದೆ ಎಂದು ಹೇಳಿದ್ದಾರೆ. ಮತ್ತೊಂದುಪ್ರಶ್ನೆಗೆ ಉತ್ತರಿಸಿದ ಇಂಧನ ಸಚಿವ ಕೆ.ಜೆ.ಜಾರ್ಜ್, ಬೇಸಿಗೆಯಲ್ಲಿ ಬೇಡಿಕೆಗೆ ತಕ್ಕಂತೆ ವಿದ್ಯುತ್ ಪೂರೈಸಲು ಸರ್ಕಾರ ಸಿದ್ಧವಿದೆ. ರೈತರ ವಿದ್ಯುತ್ ಪಂಪ್ ಸೆಟ್ ಗಳಿಗೆ ಏಳು ತಾಸುಗಳ ಕಾಲ ವಿದ್ಯುತ್ ಪೂರೈಸಲಾಗುವುದು ಎಂದು ತಿಳಿಸಿದ್ದಾರೆ. ವಿದ್ಯುತ್ ಕಳ್ಳತನದಂತಹ ಕೃತ್ಯಗಳಿಗೆ ಕಡಿವಾಣ ಹಾಕಲು ಶೀಘ್ರದಲ್ಲಿಯೇ ಅಕ್ರಮ- ಸಕ್ರಮ ಜಾರಿಗೊಳಿಸಲಾಗುವುದು. ಕುಸುಮ್-ಬಿ ಮತ್ತು ಕುಸುಮ್-ಸಿ ಯೋಜನೆಯಡಿ ಸಬ್ಸಿಡಿ ನೀಡಲಾಗುವುದು ಎಂದು ಸದನದಲ್ಲಿ ಸಚಿವರು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ೪೦೦ ಪಶು ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ ಎಂದು ಪಶು ಸಂಗೋಪನೆ ಸಚಿವ ಕೆ.ವೆಂಕಟೇಶ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಜೆ.ಎನ್.ಗಣೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈಗಾಗಲೇ ೩೬೦ ಪಶು ವೈದ್ಯರು ಕರ್ತವ್ಯಕ್ಕೆ ಹಾಜರಾಗಿದ್ದಾರೆ.

<><*<><>*><>

ಅಕ್ರಮ ಚಿನ್ನ ಕಳ್ಳ ಸಾಗಾಟ ಪ್ರಕರಣದಲ್ಲಿ ಸಿಕ್ಕಿ ಬಿದ್ದಿರುವ ರನ್ಯಾ ರಾವ್ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವುದೇ ಮಾಹಿತಿ ಇಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸಭೆಯ ಶೂನ್ಯ ವೇಳೆಯಲ್ಲಿ ಬಿಜೆಪಿಯ ವಿ.ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸಿ, ಇಬ್ಬರು ಸಚಿವರ ಕೈವಾಡ ಇರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿದೆ. ಸರ್ಕಾರ ಚಿನ್ನ ಕಳ್ಳಸಾಗಾಣಿಕೆಯಲ್ಲಿ ಭಾಗಿಯಾಗಿದೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಪರಮೇಶ್ವರ್, ಕೇಂದ್ರ ಕಂದಾಯ ಗುಪ್ತಚರ ಇಲಾಖೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದು, ಅವರು ಕೇಂದ್ರ ಸರ್ಕಾರಕ್ಕೆ ವರದಿ ನೀಡಲಿದ್ದಾರೆ. ವಿಮಾನ ನಿಲ್ದಾಣ ಕೂಡ ಕೇಂದ್ರ ಸರ್ಕಾರ ವ್ಯಾಪ್ತಿಯ ಒಳಗಿದ್ದು ಈ ಪ್ರಕರಣದಲ್ಲಿ ರಾಜ್ಯದ ಪೊಲೀಸರಿಗಾಗಲಿ, ಸರ್ಕಾರಕ್ಕಾಗಲಿ ಯಾವುದೇ ಮಾಹಿತಿ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ರೈತರು ಬೆಳೆದ ಸಾಗುವಾನಿ, ಹುಣಸೆ, ಬೀಟೆ, ರೈನ್, ಫೆಲೋಫಾರಂ, ಹುಣಸೆ, ಬೇವು, ಗುಲ್ಮೊಹರ್, ಕಾಡು ಬಾದಾಮಿ, ಮರಗಳನ್ನು ಕಟಾವು ಮಾಡಲು ಸರ್ಕಾರ ಅನುಮತಿ ನೀಡಿದೆ ಎಂದು ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವ ಈಶ್ವರ ಬಿ. ಖಂಡ್ರೆ ವಿಧಾನಪರಿಷತ್ ಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿಯ ಭಾರತಿ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ನೇರವಾಗಿ ರೈತರು ಮತ್ತು ಖಾಸಗಿ ವ್ಯಕ್ತಿಗಳು ಬೆಳೆದ ಮರಗಳನ್ನು ಖರೀದಿ ಮಾಡಲಾಗುತ್ತದೆ ಎಂದು ಹೇಳಿದರು. ಮರದ ದಿಮ್ಮಿಗಳನ್ನು ನೇರವಾಗಿ ಇತರೆ ರಾಜ್ಯಗಳಿಂದ ಹಾಗೂ ಹೊರ ದೇಶಗಳಿಂದಲೂ ಆಮದು ಮಾಡಿಕೊಳ್ಳಲಾಗುತ್ತದೆ. ರಾಜ್ಯದಲ್ಲಿ ಒಟ್ಟು ೩ ಸಾವಿರ ದ ೪೬೧ ಪರವಾನಗಿ ಹೊಂದಿರುವ ಮಿಲ್ಲುಗಳಿದ್ದು ,ಕಳೆದ ೨ ವರ್ಷಗಳಲ್ಲಿ ಅರಣ್ಯ ಇಲಾಖೆಯಿಂದ ಇ-ಹರಾಜಿನಲ್ಲಿ ಒಟ್ಟು ೪ ಲಕ್ಷ ೮೧ ಸಾವಿರದ ೬೮೫ ಘನ ಮೀಟರ್ ನಾಟಾ ಮತ್ತು ಇತರೆ ಅರಣ್ಯ ಉತ್ಪನ್ನಗಳನ್ನು ಖರೀದಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ಆಯೋಜಿಸಿದ್ದ ೧೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಅಂಗವಾಗಿ ಕೊಡಮಾಡುವ ಜೀವಮಾನ ಸಾಧನೆ ಪ್ರಶಸ್ತಿಯನ್ನು ಭಾರತೀಯ ಚಿತ್ರರಂಗದ ಮೇರು ನಟಿ, ಬಹುಭಾಷಾ ಕಲಾವಿದೆ ಶಬಾನಾ ಆಜ್ಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾವೇರಿ ನಿವಾಸದಲ್ಲಿ ನೀಡಿ ಗೌರವಿಸಿದರು.  ವಿಶ್ವ ವಿಖ್ಯಾತ ಕವಿ, ಗೀತಕಾರ ಜಾವೇದ್ ಅಖ್ತರ್ ಈ ಸಂದರ್ಭದಲ್ಲಿ ಶಬಾನಾ ಅವರ ಜೊತೆಗಿದ್ದರು. ಕರ್ನಾಟಕ ರಾಜ್ಯ ಸಾಂಸ್ಕೃತಿಕ ಪರಂಪರೆ ಮತ್ತು  ಸಂಗೀತಕ್ಕೆ ಖ್ಯಾತಿ ಹೊಂದಿದೆ ಎಂದು ಶಬಾನಾ ಮತ್ತು ಜಾವೇದ್ ಮೆಚ್ಚುಗೆ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಮ್ಮ ರಾಜ್ಯದ ಪಂಡಿತ್ ಭೀಮ್ ಸೇನ್ ಜೋಶಿ, ಕುಮಾರ ಗಂಧರ್ವ, ಗಂಗೂಬಾಯಿ ಹಾನಗಲ್ ಇವರೆಲ್ಲಾ ಹಿಂದೂಸ್ತಾನಿ ಸಂಗೀತದ ದಿಗ್ಗಜರು, ಇವರೆಲ್ಲಾ ಧಾರವಾಡದವರು ಎನ್ನುವುದು ಮತ್ತೊಂದು ವಿಶೇಷ ಎಂದು ತಿಳಿಸಿದರು.

<><*<><>*><>

ನಟಿ ರನ್ಯಾರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಇಬ್ಬರು ಸಚಿವರು ಭಾಗಿಯಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಸಚಿವರಿಬ್ಬರ ಕೈವಾಡ ಇರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಈ ಪ್ರಕರಣದಲ್ಲಿ ಹವಾಲ ನಂಟು ಬೆಸೆದುಕೊಂಡಿರುವ ಶಂಕೆ ವ್ಯಕ್ತವಾಗಿದೆ. ಆರೋಪಿ ರನ್ಯಾರಾವ್ ಬಂಧನ ಸಂದರ್ಭದಲ್ಲಿ ಸಚಿವರೊಬ್ಬರನ್ನು ಸಂಪರ್ಕಿಸಲು ಯತ್ನಿಸಿರುವುದು, ಸರ್ಕಾರದ ಪ್ರಭಾವಿಗಳ ಕೈವಾಡವಿರುವ ಬಗ್ಗೆ ಸ್ಪಷ್ಟ ಅನುಮಾನಗಳನ್ನು ಮೂಡಿಸಿದೆ ಎಂದು ದೂರಿದ್ದಾರೆ.

<><*<><>*><>

ರಾಜ್ಯ ಮಕ್ಕಳ ರಕ್ಷಣಾ ಆಯೋಗ ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ ಸಹಯೋಗದಲ್ಲಿ ಬೆಂಗಳೂರಿನಲ್ಲಿಂದು ಆಯೋಜಿಸಿದ್ದ' ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ, ಬಾಲ ನ್ಯಾಯ ಮಂಡಳಿ ಮತ್ತು ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳ ಪಾತ್ರ' ಕುರಿತ ಅರಿವು ಮೂಡಿಸುವ ಕಾರ್ಯಾಗಾರಕ್ಕೆ ಹೈಕೋರ್ಟ್ ನ್ಯಾಯಮೂರ್ತಿ ಎಸ್. ಸುನೀಲ್ ದತ್ ಯಾದವ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಪೊಲೀಸರು, ಮಕ್ಕಳ ಹಕ್ಕುಗಳ ಸಮಿತಿ ಸದಸ್ಯರನ್ನೊಳಗೊಂಡ ಸಹಾಯವಾಣಿ ಸ್ಥಾಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ. ನಾಗಣ್ಣ ಗೌಡ, ಕಾನೂನು ಮತ್ತು ನೀತಿ ನಿಯಮ ಉಲ್ಲಂಘಿಸಲು ಯಾರಿಗೂ ಹಕ್ಕಿಲ್ಲ. ಮಕ್ಕಳ ಹಕ್ಕುಗಳ ರಕ್ಷಣೆಗೆ ಎಲ್ಲರೂ ಬದ್ಧರಾಗಿರಬೇಕು ಎಂದರು.

<><*<><>*><>

ವೃತ್ತಿಪರ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಶೈಕ್ಷಣಿಕ ಸಾಲಕ್ಕಾಗಿ ಸಲ್ಲಿಸುವ ಅರ್ಜಿಗಳನ್ನು ಸಕಾರಣವಿಲ್ಲದೇ ತಿರಸ್ಕರಿಸಬಾರದು ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬ್ಯಾಂಕ್ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಶೈಕ್ಷಣಿಕ ಸಾಲ ಪಡೆದು ಓದುವ ವಿದ್ಯಾರ್ಥಿಗಳ ಭವಿಷ್ಯ ಉತ್ತಮವಾಗಿರುತ್ತದೆ. ಮಹಿಳೆಯರು ಕೂಡ ಸ್ವಾವಲಂಬಿಯಾಗಲು ಬ್ಯಾಂಕ್‌ಗಳ ಸಾಲ ಸೌಲಭ್ಯ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದ್ದಾರೆ. ಶೈಕ್ಷಣಿಕ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ ೫ ಸಾವಿರದ ೯೫೪ ವಿದ್ಯಾರ್ಥಿಗಳ ಪೈಕಿ ೨ ಸಾವಿರದ ೬೬೫ ವಿದ್ಯಾರ್ಥಿನಿಯರೇ ಇರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಈ ಬಾರಿಯ ಆಯವ್ಯಯದಲ್ಲಿ ಹಾಸನ ಜಿಲ್ಲೆಗೆ ಯಾವುದೇ ವಿಶೇಷ ಕೊಡುಗೆ ನೀಡಿಲ್ಲ. ಜಿಲ್ಲೆಯನ್ನು ಸಂಪೂರ್ಣ ಕಡೆಗಣಿಸಲಾಗಿದೆ ಎಂದು ಮಾಜಿ ಸಚಿವ ಎಚ್.ಡಿ.ರೇವಣ್ಣ ಆರೋಪಿಸಿದ್ದಾರೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳು ಬಾಕಿ ಉಳಿದಿವೆ ಎಂದು ತಿಳಿಸಿದ್ದಾರೆ. ಹಾಸನ ಪಶು ವೈದ್ಯಕೀಯ ಮತ್ತು ಕೃಷಿ ಕಾಲೇಜಿನ ಅಭಿವೃದ್ಧಿಗೆ ಹಣ ಒದಗಿಸುವ ಭರವಸೆ ನೀಡಲಾಗಿತ್ತು, ಸರ್ಕಾರಿ ಮಲ್ಟಿ ಸ್ಪೆಶಾಲಿಟಿ ಜಿಲ್ಲಾಸ್ಪತ್ರೆ, ರೈಲ್ವೆ ಮೇಲ್ಸೇತುವೆ, ಜಿಲ್ಲಾ ಕೇಂದ್ರಕ್ಕೆ ಮಹಿಳಾ ಪೊಲೀಸ್ ಠಾಣೆ, ವಸತಿ ಶಾಲೆಗಳು, ಚನ್ನಪಟ್ಟಣ ಕೆರೆ ಅಭಿವೃದ್ಧಿ, ಸೇರಿದಂತೆ ಹಲವು ನಿರೀಕ್ಷೆಗಳನ್ನು ಇಡಲಾಗಿತ್ತು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಮಕ್ಕಳನ್ನು ಯಾವುದೇ ಕಾರಣಕ್ಕೂ ಶಿಕ್ಷಣದಿಂದ ವಂಚಿತಗೊಳಿಸದಿರಿ ಎಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಸಲಹೆ ನೀಡಿದ್ದಾರೆ. ಯಾದಗಿರಿ ನಗರದ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ಮೇದಾರ ಸಮುದಾಯದ ಜನರೊಂದಿಗೆ ಸಂವಾದ ನಡೆಸಿ ಸರ್ಕಾರದ ಯೋಜನೆಗಳ ಲಾಭ ಪಡೆದು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತೆ ತಿಳಿಸಿದ್ದಾರೆ. ಮಕ್ಕಳನ್ನು ಶಾಲೆ ಬಿಡಿಸಿ, ಕೆಲಸಕ್ಕೆ ಕಳುಹಿಸದಂತೆ ಪೋಷಕರಿಗೆ ಕಿವಿ ಮಾತು ಹೇಳಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>